ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಯೋಜನೆಗಳ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

1182 (1344) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಡವರು, ಮಹಿಳೆಯರು ಮತ್ತು ಹಿರಿಯ ನಾಗರಿಕರಿಗಾಗಿ ಸರ್ಕಾರದಲ್ಲಿ ಚಾಲ್ತಿಯಲ್ಲಿರುವ ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) ಕಳೆದ 3 ವರ್ಷಗಳ ಅವಧಿಯಲ್ಲಿ ಈ ಯೋಜನೆಗಳ ಅಡಿಯಲ್ಲಿ ನೆರವು ಕೋರಿ ಸಲ್ಲಿಕೆಯಾಗಿರುವ ಒಟ್ಟು ಅರ್ಜಿಗಳೆಷ್ಟು ; (ಯೋಜನಾವಾರು ವಿವರ ನೀಡುವುದು)

(ಇ) ಕಳೆದ 3 ವರ್ಷಗಳ ಅವಧಿಯಲ್ಲಿ ಈ ವಿವಿಧ ಯೋಜನೆಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ;ಈ ಪೈಕಿ ಫಲಾನುಭವಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಮತ್ತು ಫಲಾನುಭವಿಗಳ ಸಂಖ್ಯೆ ಎಷ್ಟು ; (ಯೋಜನಾವಾರು ಮತ್ತು ವರ್ಷಾವಾರು ವಿವರ ನೀಡುವುದು )

(ಈ) ಈ ಯೋಜನೆಗಳಡಿಯಲ್ಲಿ ಸಕಾಲದಲ್ಲಿ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಸಕಾಲದಲ್ಲಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?